ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:4/2021

ಚಾಸಾ:5 ಪ್ರಾಸಾ:2

ದಿನಾಂಕ: 20.06.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ತೌಸೀಫ್ ಅಹಮ್ಮದ್ |
| ತಂದೆಯ ಹೆಸರು | : | ಅಬ್ದುಲ್ ರಜಾಕ್ |
| ವಯಸ್ಸು | : | 22 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಮರವಂತೆ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿತರ ಪರಿಚಯವಿದೆ. ಚಾಸಾ-1ರವರ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 21-05-2021 ರಂದು ಚಾಸಾ-1 ಮತ್ತು 2 ರವರು ಕಾರಿನಲ್ಲಿ ನಾವುಂದದಿಂದ ಕುಂದಾಪುರಕ್ಕೆ ಬರುತ್ತಿದ್ದಾಗ ಬೆಳಗ್ಗೆ 9 ಗಂಟೆ ಸಮಯದಲ್ಲಿ ಆರೋಪಿತರು ಹಿಂಬಾಲಿಸಿಕೊಂಡು ಬಂದು ತಡೆದು ನಿಲ್ಲಿಸಿ ಅವಾಚ್ಯವಾಗಿ ಬೈದು ಜೀವ ಬೆದರಿಕೆ ಹಾಕಿ ಕೈಗಳಿಂದ ಹೊಡೆದು ಕಾಲಿನಿಂದ ತುಳಿದು ಹಲ್ಲೆ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಚಾಸಾ-1 ಮತ್ತು 2 ರವರು ತಪ್ಪಿಸಿಕೊಂಡು ಕುಂದಾಪುರದ ಕಡೆಗೆ ಹೋಗಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ಹಿನ್ನೆಲೆಯಲ್ಲಿ ಕಾರು ನಿಯಂತ್ರಣ ತಪ್ಪಿ ಚರಂಡಿಗೆ ಮುಗುಚಿ ಬಿದ್ದಿತ್ತು ಎಂದರೆ ನನಗೆ ಗೊತ್ತಿಲ್ಲ. ಈ ಬಗ್ಗೆ ಚಾಸಾ-1ರವರು ದಿ: 19-05-2020 ರಂದು ಸಂಜೆ ನಮ್ಮ ನಡುವೆ ಜಗಳವಾಡಿದ್ದು, ಚಾಸಾ-1ರವರು ಹುಡುಗಿಯ ಜೊತೆ ಮಾತನಾಡುತ್ತಿದ್ದ ಬಗ್ಗೆ ಪ್ರಶ್ನಿಸಿ ಆ ವಿಚಾರದಲ್ಲಿ ನನ್ನ ಮಾವನಾದ ಚಾಸಾ-1ರವರು 1ನೇ ಆರೋಪಿಗೆ ತಿಳಿಸಿದಾಗ ಗಂಗೊಳ್ಳಿ ಠಾಣೆಯಲ್ಲಿ ದೂರು

ದಾಖಲಿಸುವಂತೆ ಹೇಳಿದ್ದು, ನಾನು ಅದಕ್ಕೆ ಅನುಗುಣವಾಗಿ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ಮೇಲೆ ಹೇಳಿದ ಘಟನೆ ಸಂಭವಿಸಿದ್ದು ನಮ್ಮ ಮಾವಂದಿರು ಹಾಗೂ ಆ ರೋಪಿತರು ಪರಸ್ಪರ ಗಲಾಟೆ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದರಂತೆ ನಾನು ದಿಃ 22-05-2020 ರಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿತರು ನನ್ನ ಪರಿಚಯಸ್ಥರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**